**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 87/2020**

**ಚಾ.ಸಾಃ 23, ಪ್ರಾ.ಸಾಃ 10**

| | |
|---|---|
| ಸಾಕ್ಷಿದಾರನ ಹೆಸರು | ಚೆಲುವರಾಜು |
| ತಂದೆಯ ಹೆಸರು | ಬೆಟ್ಟೆಗೌಡ |
| ವಯಸ್ಸು | 49 ವರ್ಷಗಳು |
| ಉದ್ಯೋಗ | ಪೋಲೀಸ್ ಉಪಾಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಮಂಗಳೂರು |
| ವಾಸ್ತವ್ಯ | ಮಂಗಳೂರು |

**ಸಾಕ್ಷಿಯನ್ನು ದಿನಾಂಕಃ 11-07-2024 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ಡಿಸೆಂಬರ-2017 ರಿಂದ ಸಪ್ಟಂಬರ-2019 ರ ವರೆಗೆ ಹೊನ್ನಾವರ ವೃತ್ತದಲ್ಲಿ ವೃತ್ತ ನಿರೀಕ್ಷಕನಾಗಿ ಕೆಲಸ ಮಾಡಿರುತ್ತೇನೆ.

ಈ ಪ್ರಕರಣದ ಕಡತವನ್ನು ದಿನಾಂಕಃ **26-03-2019** ರಂದು ಚಾಸಾ-22 ರವರಿಂದ ಪಡೆದು ಪರಿಶೀಲಿಸಿ ಮುಂದಿನ ತನಿಖೆಯನ್ನು ಕೈಗೊಂಡಿರುತ್ತೇನೆ.

ಅದೇ ದಿನ ಘಟನಾ ಸ್ಥಳಕ್ಕೆ ಶ್ವಾನದಳ ಮತ್ತು ಬೆರಳಚ್ಚು ತಜ್ಞರನ್ನು ಕರೆಸಿ ಪರಿಶೀಲಿಸಿರುತ್ತೇನೆ. ಘಟನಾ ಸ್ಥಳವಾದ ಹೊನ್ನಾವರದ ಅಗ್ರಹಾರ ಮಂಡಗದ್ದೆಯ ಪಿರ್ಯಾದುದಾರರ ಮನೆಯಾಗಿದ್ದು ಸದರಿ ಸ್ಥಳಕ್ಕೆ ಚಾಸಾ-2 ಮತ್ತು 3 ರವರನ್ನು ಬರಮಾಡಿಕೊಂಡು ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಸ್ಥಳ ಪಂಚನಾಮೆಯನ್ನು ತಯಾರಿಸಿ ಕಚ್ಚಾ ನಕಾಶೆಯನ್ನು ತಯಾರಿಸಿ 3 ಫೋಟೋ ತೆಗೆಸಿರುತ್ತೇನೆ. ಸ್ಥಳ ಪಂಚನಾಮೆಯನ್ನು ನೋಡುತ್ತಿದ್ದು ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ಕಚ್ಚಾ ನಕಾಶೆಯನ್ನು ನೋಡುತ್ತಿದ್ದು ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. 3 ಫೋಟೋಗಳನ್ನು ನೋಡುತ್ತಿದ್ದು ನಿಪಿ-3 ರಿಂದ 5 ಎಂದು ಗುರುತಿಸಲಾಗಿದೆ.

ಅದೇ ದಿನ ಚಾಸಾ-8 ರಿಂದ 10 ರವರ ಹೇಳಿಕೆ ಪಡೆದಿರುತ್ತೇನೆ.

ನಂತರ ಕೇಸಿನ ಕಡತವನ್ನು ಚಾಸಾ-24 ರವರಿಗೆ ವಹಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಾದ ಶ್ರೀ ವಿ. ಎಂ. ಭಂಡಾರಿಯವರಿಂದಃ**

ಚಾಸಾ-1 ರವರ ಮನೆ ಹೊನ್ನಾವರದಿಂದ ಉತ್ತರದಿಕ್ಕಿಗೆ ಸುಮಾರು 9 ಕಿಲೋಮೀಟರ್ ದೂರದಲ್ಲಿದೆ ಎಂದರೆ ಸರಿ. ಮೊದಲನೇ ಪಂಚ ಕುಮಟಾದವರು ಎಂದರೆ ಸರಿ. ಆದರೆ ಆತ ಹಾಲಿ ಹಳದೀಪುರದಲ್ಲಿ ವಾಸವಾಗಿದ್ದರು. ಚಾಸಾ-3 ಗ್ರಾಮ ಪಂಚಾಯತಿ ಸದಸ್ಯರಾಗಿದ್ದರು. ಆತನ ಮನೆ

ಚಾಸಾ–1ರವರ ಮನೆಯಿಂದ 6 ಕಿಲೋಮೀಟರ್ ದೂರ ಇದೆ ಎಂದರೆ ಸರಿಯಲ್ಲ, ಹತ್ತಿರದಲ್ಲಿದೆ. ಚಾಸಾ–1ರವರ ಮನೆಯ ಸುತ್ತಮುತ್ತ ಸಾಕಷ್ಟು ಮನೆಗಳಿವೆ. ಸ್ಥಳಕ್ಕೆ ಹೋಗುವ ಪೂರ್ವದಲ್ಲಿ ಪಂಚರಿಗೆ ಯಾವುದೇ ನೋಟೀಸು ನೀಡಿರುವುದಿಲ್ಲ. ನಿಪಿ–2 ಕಚ್ಚಾ ನಕಾಶೆಯನ್ನು ಸಿಬ್ಬಂದಿ ಬರೆದಿರುತ್ತಾರೆ. ಕಚ್ಚಾ ನಕಾಶೆ ತಯಾರಿಸಿದವರ ಹೆಸರು, ಸಹಿ ವಗೈರೆ ಅದರ ಮೇಲೆ ಇಲ್ಲ ಎಂದರೆ ಸರಿ. ನಾನು ಆ ದಿನ ಘಟನಾ ಸ್ಥಳಕ್ಕೆ ಹೋಗಿಲ್ಲ, ಸ್ಥಳ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ಸಾಕ್ಷಿದಾರರು ಯಾವುದೇ ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ. ಪಂಚನಾಮೆ ಮತ್ತು ಕಚ್ಚಾ ನಕಾಶೆಯನ್ನು ಠಾಣೆಯಲ್ಲಿ ತಯಾರಿಸಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**ಸಹಿ ಇದೆ.**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**